ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಬೀದರ್ ನಗರ ಸಭೆ ವ್ಯಾಪ್ತಿಯ ಒಳಚರಂಡಿ ಕಾಮಗಾರಿಗಳ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

394 (576) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಬೀದರ್ ನಗರ ಸಭೆಯ ಅಭಿವೃದ್ಧಿಗಾಗಿ ಸರ್ಕಾರ ಬಿಡುಗಡೆ ಮಾಡಿದ ಮೊತ್ತವೆಷ್ಟು ;

ಯಾವ ಯಾವ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಲಾಗಿದೆ ;

(ಆ) ಬೀದರ್ ನಗರ ಸಭೆಯ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿ ಪೂರ್ಣಗೊಳ್ಳದೇ ಇರುವುದಕ್ಕೆ ಅನುದಾನದ ಕೊರೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಬಾಕಿ ಕಾಮಗಾರಿಗಳಿಗೆ ಮಂಜೂರಾತಿಯನ್ನು ಮತ್ತು ಹಣವನ್ನು ಎಷ್ಟು ದಿನಗಳಲ್ಲಿ ಬಿಡುಗಡೆ ಮಾಡಲಾಗುವುದು ;

(ಈ) ಒಳಚರಂಡಿ ಕಾಮಗಾರಿಯಿಂದ ನಗರದ ರಸ್ತೆಗಳು ಹಾಳಾಗಿದ್ದು, ದುರಸ್ಥಿ ಮಾಡಲು ಬೇಕಾಗುವ ಮೊತ್ತವೆಷ್ಟು ; ಈ ಕಾಮಗಾರಿಗಳನ್ನು ಮಂಜೂರು ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು ;

(ಉ) ಈ ಎಲ್ಲಾ ಕಾಮಗಾರಿಗಳನ್ನು ಎಷ್ಟು ದಿನಗಳಲ್ಲಿ ಪೂರ್ಣಗೊಳಿಸಲಾಗುವುದು ? (ವಿವರ ನೀಡುವುದು)